# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 231 |
| ಸದಸ್ಯರ ಹೆಸರು | : | ಶ್ರೀ ಬಿ.ಎಂ. ಫಾರೂಖ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 14-02-2024 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ | ಮಂಗಳೂರಿನ ಬೈಕಂಪಾಡಿ ಕೈಗಾರಿಕಾ ಪ್ರದೇಶದ ಮಧ್ಯೆ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಯ ಬೈಕಂಪಾಡಿ ಮೇಲ್ಸೇತುವೆ ಬಳಿ ಅಗಲ ಕಿರಿದಾಗಿ ಸಂಚಾರಿ ದಟ್ಟಣೆಯಿಂದ ಗಂಭೀರ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಮಂಗಳೂರು ಬೈಕಂಪಾಡಿ ಹೆದ್ದಾರಿಯು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕಾರ್ಯವ್ಯಾಪ್ತಿಗೆ ಒಳಪಡುತ್ತದೆ. ಈ ಸಂಬಂಧ ಸದರಿಯವರು ಈ ಕೆಳಕಂಡಂತೆ ವರದಿಸಿರುತ್ತಾರೆ. ಬೈಕಂಪಾಡಿ ಕೈಗಾರಿಕಾ ಪ್ರದೇಶದ ವಾಹನ ದಟ್ಟಣೆಯನ್ನು ತಗ್ಗಿಸಲು ಈ ಮಾರ್ಗದ ಮೂಲಕ ಹಾದು ಹೋಗುವ ಹೆದ್ದಾರಿಯ ಭಾಗವಾದ ಕುದುರೆಮುಖ ಕಬ್ಬಿಣ ಅದಿರು ಕಂಪನಿ ಲಿಮಿಟೆಡ್ (KIOCL) ಜಂಕ್ಷನ್‌ದಿಂದ ಬೈಕಂಪಾಡಿವರೆಗೆ ಮೇಲ್ಸೇತುವೆ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲು ಕೇಂದ್ರ ಸರ್ಕಾರದಿಂದ ಯೋಜನೆಯನ್ನು ರೂಪಿಸಿದ್ದು, ಪ್ರಸ್ತುತ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ವಿಸ್ತೃತ ಯೋಜನಾ ವರದಿಯನ್ನು ತಯಾರಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ. |
| ಆ | ಎನ್.ಹೆಚ್.ಎ.ಐ. ಸುಪರ್ದಿನಲ್ಲಿರುವ ಈ ಹೆದ್ದಾರಿಯನ್ನು ಸುಗಮ ಸಂಚಾರ ಕಲ್ಪಿಸಲು ಸರ್ಕಾರದ ಮುಂದಿರುವ ಯೋಜನೆಗಳೇನು; (ವಿವರ ನೀಡುವುದು) | |
| ಇ | ಬಂದರು ಕೈಗಾರಿಕಾ ಪ್ರದೇಶಗಳ ಸರಕು ಸಾಗಣೆ ಘನವಾಹನಗಳು ಬೈಕಾಂಪಾಡಿ ಮೇಲ್ಸೇತುವೆಯನ್ನು ಬಳಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | |
| ಈ | ಹಾಗಿದ್ದಲ್ಲಿ, ಮೊದಲು ಇದ್ದಂತೆ ಸೇತುವೆ ಕೆಳಗಿನ ರಸ್ತೆಯನ್ನು ಸರಕು-ಘನವಾಹನ ಸಂಚಾರಕ್ಕಾಗಿ ಅಭಿವೃದ್ಧಿ ಪಡಿಸಿ ಮೇಲ್ಸೇತುವೆಯನ್ನು ಸರಾಗ-ಸುಗಮ ಸಂಚಾರಕ್ಕಾಗಿ ವ್ಯವಸ್ಥೆಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | |

ಕಡತ ಸಂಖ್ಯೆ: ಲೋಇ 40 ಸಿಎನ್‌ಹೆಚ್ 2024 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು